**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–41)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2020ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ 38)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ 2020 (2020ರ ಕರ್ನಾಟಕ ಅಧಿನಿಯಮ 38)ರ, 3ನೇ ಪ್ರಕರಣದ (4)ನೇ ಉಪಪ್ರಕರಣದಲ್ಲಿರುವ (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು"

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ 38)ನ್ನು, ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ,

## **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕೃಷ್ಣ ಭೈರೇಗೌಡ**
ಕಂದಾಯ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2020

## (2020ರ ಕರ್ನಾಟಕ ಅಧಿನಿಯಮ ಸಂಖ್ಯೆ 38) ಉದ್ಧೃತ ಭಾಗ

**XXX XXX XXX**

**3. ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ಸರ್ವಜ್ಞ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದ ಅಂಥ ಸ್ಥಳದಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಮತ್ತು ವಿಲೆ ಮಾಡುವ ಹಾಗೂ ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯ ಮಂತ್ರಿಯವರು ಅಧ್ಯಕ್ಷರಾಗಿರತಕ್ಕದ್ದು;

(ಬಿ) ಹಾವೇರಿ ಜಿಲ್ಲೆಯ ಉಸ್ತುವಾರಿಯಲ್ಲಿರುವ ಮಂತ್ರಿಗಳು ಉಪಾಧ್ಯಕ್ಷರಾಗಿರತಕ್ಕದ್ದು;

(ಸಿ) ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು - ಸದಸ್ಯರು

(ಡಿ) ಕಂದಾಯ ಮಂತ್ರಿಗಳು – ಸದಸ್ಯರು

(ಇ) ಹಣಕಾಸು ಮಂತ್ರಿಗಳು – ಸದಸ್ಯರು

(ಎಫ್) ಪ್ರವಾಸೋದ್ಯಮ ಮಂತ್ರಿಗಳು - ಸದಸ್ಯರು

(ಜಿ) ಲೋಕೋಪಯೋಗಿ ಮಂತ್ರಿಗಳು – ಸದಸ್ಯರು

(ಎಚ್) ಸರ್ವಜ್ಞ ಕ್ಷೇತ್ರವನ್ನು ಭಾಗಶ: ಅಥವಾ ಸಂಪೂರ್ಣವಾಗಿ ಪ್ರತಿನಿಧಿಸುವ ಲೋಕಸಭಾ ಮತ್ತು ವಿಧಾನಸಭೆಯ ಸದಸ್ಯರು ಹಾಗೂ ಸರ್ವಜ್ಞ ಕ್ಷೇತ್ರದಲ್ಲಿ ಮತದಾರರಾಗಿ ನೋಂದಾಯಿತರಾದ ರಾಜ್ಯಸಭೆಯ ಮತ್ತು ವಿಧಾನ ಪರಿಷತ್ತಿನ ಸದಸ್ಯರು. – ಸದಸ್ಯರು

(ಐ) ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ. – ಪದನಿಮಿತ್ತ ಸದಸ್ಯರು

(ಜೆ) ಸರ್ಕಾರದ ಪ್ರಧಾನ ಕಾರ್ಯದರ್ಶಿ ಅಥವಾ ಕಾರ್ಯದರ್ಶಿ, ಕಂದಾಯ ಇಲಾಖೆ. - ಪದನಿಮಿತ್ತ ಸದಸ್ಯರು

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 12ನೇ ಆಗಸ್ಟ್ 2025